**ಕರ್ನಾಟಕ ವಿಧಾನ ಪರಿಷತ್ತು**

ಸದಸ್ಯರ ಹೆಸರು : ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು)
ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 1090
ಉತ್ತರ ದಿನಾಂಕ : 13.03.2020

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ತುಮಕೂರು ಜಿಲ್ಲೆಯಲ್ಲಿ ಈವರೆಗೆ ಅನುಮೋದನೆ ಆಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳು ಎಷ್ಟು; (ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು) | ತುಮಕೂರು ಜಿಲ್ಲೆಯ ಗ್ರಾಮೀಣ ಜನವಸತಿಗಳಲ್ಲಿ ಈವರೆಗೆ ಒಟ್ಟು 1523 ನೀರು ಶುದ್ಧೀಕರಣ ಘಟಕಗಳು ಅನುಮೋದನೆಯಾಗಿದ್ದು, ವಿಧಾನಸಭಾ ಕ್ಷೇತ್ರವಾರು ಮಾಹಿತಿಯನ್ನು **ಅನುಬಂಧದಲ್ಲಿ** ನೀಡಿದೆ. |
| ಆ) | ತುಮಕೂರು ಜಿಲ್ಲೆಯಲ್ಲಿ ಅನುಮೋದನೆ ಆಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳಲ್ಲಿ ಎಷ್ಟು ಘಟಕಗಳು ಕಾರ್ಯನಿರ್ವಹಿಸುತ್ತಿವೆ ಹಾಗೂ ಎಷ್ಟು ಘಟಕಗಳು ಕಾರ್ಯನಿರ್ವಹಿಸುತ್ತಿಲ್ಲ; ಕಾರ್ಯನಿರ್ವಹಿಸುತ್ತಿಲ್ಲದಿರುವುದಕ್ಕೆ ಕಾರಣಗಳೇನು; (ಸಂಪೂರ್ಣ ಮಾಹಿತಿ ನೀಡುವುದು) | ತುಮಕೂರು ಜಿಲ್ಲೆಯ ಗ್ರಾಮೀಣ ಜನವಸತಿಗಳಲ್ಲಿ ಅನುಮೋದನೆಯಾಗಿರುವ ನೀರು ಶುದ್ಧೀಕರಣ ಘಟಕಗಳ ಪೈಕಿ, 1492 ಘಟಕಗಳನ್ನು ಅನುಷ್ಠಾನಗೊಳಿಸಿದ್ದು, 1287 ಘಟಕಗಳು ಕಾರ್ಯನಿರ್ವಹಿಸುತ್ತಿದ್ದು, 205 ಘಟಕಗಳು ತಾತ್ಕಾಲಿಕವಾಗಿ ದುರಸ್ತಿಯಲ್ಲಿರುತ್ತವೆ. ಕಚ್ಚಾ ನೀರಿನ ಸಮಸ್ಯೆ, ವಿದ್ಯುತ್ ಸಮಸ್ಯೆ, ಏಜೆನ್ಸಿ ಸಮಸ್ಯೆ ಹಾಗೂ ಕಾರ್ಯಚರಣೆ ಮತ್ತು ನಿರ್ವಹಣೆ ಸಮಸ್ಯೆಯಿಂದ ನೀರು ಶುದ್ಧೀಕರಣ ಘಟಕಗಳು ತಾತ್ಕಾಲಿಕವಾಗಿ ದುರಸ್ತಿಯಲ್ಲಿರುತ್ತವೆ. |
| ಇ) | 2019-20 ನೇ ಸಾಲಿನಲ್ಲಿ ತುಮಕೂರು ಜಿಲ್ಲೆಗೆ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅಳವಡಿಸಲು ಇ-ಪ್ರೊಕ್ಯೂರ್‌ಮೆಂಟ್‌ಗಳ ಮೂಲಕ ಟೆಂಡರ್ ಕರೆದಿರುವುದು ನಿಜವೇ; ಟೆಂಡರ್ ಪ್ರಕ್ರಿಯೆ ಮುಗಿದಿದ್ದರೆ ಗುತ್ತಿಗೆದಾರರನ್ನು ನೇಮಿಸಲಾಗಿದೆಯೇ? (ಸಂಪೂರ್ಣ ಮಾಹಿತಿ ನೀಡುವುದು) | 2019-20ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ಅನುಮೋದನೆಯಾಗಿರುವ ತುಮಕೂರು ಜಿಲ್ಲೆಯ ಗ್ರಾಮೀಣ ಜನವಸತಿಗಳಲ್ಲಿ ನೀರು ಶುದ್ಧೀಕರಣ ಘಟಕಗಳನ್ನು ಅಳವಡಿಸಲು ಇ-ಪ್ರೊಕ್ಯೂರ್‌ಮೆಂಟ್‌ಗಳ ಮೂಲಕ ಟೆಂಡರ್ ಕರೆಯಲಾಗಿದ್ದು, ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. |

ಸಂ:ಗ್ರಾಕುನೀ&ನೈಇ 85 ಗ್ರಾನೀಸ(5)20

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

## ಅನುಬಂಧ–1

**ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 895 (1090)ರ ಲಗತ್ತು :**

**ತುಮಕೂರು ಜಿಲ್ಲೆ ವ್ಯಾಪ್ತಿಯ ಗ್ರಾಮೀಣ ಪ್ರದೇಶಗಳಲ್ಲಿ ಅನುಷ್ಠಾನಗೊಳಿಸಿರುವ ನೀರು ಶುದ್ಧೀಕರಣ ಘಟಕಗಳ ವಿವರ:**

| ಕ್ರ. ಸಂ. | ವಿಧಾನಸಭಾ ಕ್ಷೇತ್ರ | ಅನುಮೋದಿತ ಘಟಕಗಳ ಸಂಖ್ಯೆ | ಅನುಷ್ಠಾನಗೊಳಿಸಿರುವ ಘಟಕಗಳ ಸಂಖ್ಯೆ | ಕಾರ್ಯ ನಿರ್ವಹಿಸುತ್ತಿರುವ ಘಟಕಗಳ ಸಂಖ್ಯೆ | ತಾತ್ಕಾಲಿಕವಾಗಿ ದುರಸ್ಥಿಯಲ್ಲಿರುವ ಘಟಕಗಳ ಸಂಖ್ಯೆ |
|---|---|---|---|---|---|
| 1 | ಚಿಕ್ಕನಾಯಕನಹಳ್ಳಿ | 115 | 115 | 85 | 30 |
| 2 | ಗುಬ್ಬಿ | 136 | 135 | 109 | 26 |
| 3 | ಕೊರಟಗೆರೆ | 149 | 145 | 139 | 6 |
| 4 | ಕುಣಿಗಲ್ | 104 | 99 | 66 | 33 |
| 5 | ಮಧುಗಿರಿ | 226 | 225 | 206 | 19 |
| 6 | ಪಾವಗಡ | 272 | 271 | 234 | 37 |
| 7 | ಶಿರಾ | 209 | 209 | 190 | 19 |
| 8 | ತಿಪಟೂರು | 109 | 90 | 74 | 16 |
| 9 | ತುಮಕೂರು | 123 | 123 | 111 | 12 |
| 10 | ತುರುವೇಕೆರೆ | 80 | 80 | 73 | 7 |
| **ಒಟ್ಟು** | | **1523** | **1492** | **1287** | **205** |